# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2358(2789)
ಸದಸ್ಯರ ಹೆಸರು : ಶ್ರೀ ಆರ್.ಬಿ ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 28-03-2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಚಂದ್ರಗುತ್ತಿ ಹೋಬಳಿ ಸುತ್ತಮುತ್ತ ಯಾವುದೇ ಪದವಿ ಪೂರ್ವ ಕಾಲೇಜುಗಳು ಇಲ್ಲದಿರುವುದರಿಂದ ಸದರಿ ಹೋಬಳಿ ವಿದ್ಯಾರ್ಥಿಗಳು 18 ಕಿ.ಮೀ.ದೂರದ ತಾಲ್ಲೂಕು ಕೇಂದ್ರದಲ್ಲಿರುವ ಪದವಿ ಪೂರ್ವ ಕಾಲೇಜಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ದಿನಂಪ್ರತಿ 18 ಕಿ.ಮೀ ಹೋಗಿ ಬರುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಇ) | ಮಕ್ಕಳ ಅನುಕೂಲಕ್ಕಾಗಿ ಸೊರಬ ತಾಲ್ಲೂಕಿನ ಚಂದ್ರಗುತ್ತಿ ಹೋಬಳಿಯಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಸರ್ಕಾರ ಉದ್ದೇಶಿಸಿದೆಯೇ; (ವಿವರ ನೀಡುವುದು) | ರಾಜ್ಯದ 99 ಸರ್ಕಾರಿ ಪ್ರೌಢ ಶಾಲೆಗಳನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆ ಇದ್ದು, ಅದರಲ್ಲಿ ಶಿವಮೊಗ್ಗ ಜಿಲ್ಲೆಯ ಸೂರಬ ತಾಲ್ಲೂಕಿನ ಚಂದ್ರಗುತ್ತಿ ಸಮೀಪವಿರುವ ಹರೀಶಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯನ್ನು ಉನ್ನತೀಕರಿಸಿ ಸರ್ಕಾರಿ ಪದವಿ ಪೂರ್ವ ಕಾಲೇಜನ್ನಾಗಿ ಮೇಲ್ದರ್ಜೇಗೇರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |
| ಈ) | ಸೊರಬ ತಾಲ್ಲೂಕಿನ ಕೇಂದ್ರ ಸ್ಥಾನದಲ್ಲಿರುವ ಹಾಗೂ ಆನವಟ್ಟಿ ಪದವಿ ಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ-ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು; (ವಿವರ ನೀಡುವುದು) | (ಕೆಳಗಿನ ಕೋಷ್ಟಕಗಳು) |

1.ಸರ್ಕಾರಿ ಪದವಿ ಪೂರ್ವ ಕಾಲೇಜು, ಸೂರಬ.

| | ಬಾಲಕರು | ಬಾಲಕಿಯರು | ಒಟ್ಟು |
|---|---|---|---|
| ಪ್ರಥಮ | 355 | 375 | 730 |
| ದ್ವಿತೀಯ | 293 | 338 | 631 |

2.ಸರ್ಕಾರಿ ಪದವಿ ಪೂರ್ವ ಕಾಲೇಜು, ಆನವಟ್ಟಿ.

| | ಬಾಲಕರು | ಬಾಲಕಿಯರು | ಒಟ್ಟು |
|---|---|---|---|
| ಪ್ರಥಮ | 475 | 587 | 1062 |
| ದ್ವಿತೀಯ | 293 | 458 | 751 |

| | | |
|---|---|---|
| ಉ) | ಮಕ್ಕಳ ವಿದ್ಯಾಭ್ಯಾಸದ ದೃಷ್ಟಿಯಿಂದ ಅದೇ ಜಾಗದ ಸಮೀಪ ಮತ್ತೊಂದು ಕಟ್ಟಡದಲ್ಲಿ ಮೂಲಭೂತ ಸೌಲಭ್ಯಗಳನ್ನು ಒಳಗೊಂಡಂತೆ ಬಾಲಕಿಯರಿಗೆ ಪ್ರತ್ಯೇಕ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಅಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |

**ಸಂಖ್ಯೆ: ಇಪಿ 68 ಡಿಜಿಡಬ್ಲ್ಯೂ 2022**

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು